ಅಸಲು ದಾವೆ ನಂಃ 01/2020 ಪಿ.ಡಬ್ಲ್ಯೂಃ2– ಬಸವರಾಜ ಯಾವಗಲ್ಲ

ಸಾಕ್ಷಿಯನ್ನು ಸತ್ಯ ಪ್ರತಿಜ್ಞೆಯ ಮೇರೆಗೆ ಇಂದು ದಿನಾಂಕಃ 29-08-2022 ರಂದು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ – ವಾದಿ ಪರ ಶ್ರೀ. ವಿ. ಎಸ್. ಬಂಗಾರಿ ವಕೀಲರಿಂದಃ**

ನಾನು ಈ ದಾವೆಯಲ್ಲಿ ವಾದಿ ಪರ ಜಿ ಪಿ. ಎ. ಹೋಲ್ಡರ ಇರುತ್ತೇನೆ. ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮುಖಾಂತರ ಸಲ್ಲಿಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ವಿಷಯಗಳು ನನಗೆ ತಿಳಿದ ಮಾಹಿತಿಯಂತೆ ಸತ್ಯವಾಗಿರುತ್ತವೆ. ಪ್ರಮಾಣ ಪತ್ರವನ್ನು ನಾನು ನೀಡಿದ ಮಾಹಿತಿ ಮೇರೆಗೆ ತಯಾರಿಸಲಾಗಿರುತ್ತದೆ. ಪ್ರಮಾಣ ಪತ್ರವನ್ನು ನನಗೆ ಓದಿ ಹೇಳಲಾಗಿದ್ದು , ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಈ ಹಿಂದೆ ನನ್ನ ತಂದೆ ಪಿ. ಡಬ್ಲೂ. 1 ಎಂದು ವಿಚಾರಣೆಯಾಗಿ , ಕೆಲವೊಂದು ದಾಖಲೆಗಳನ್ನು ಹಾಜರು ಮಾಡಿರುತ್ತಾರೆ. ಅದೇ ದಾಖಲೆಗಳನ್ನು ನಾನು ಸಹ ನನ ಪರವಾಗಿ ಗುರುತಿಸಿಕೊಳ್ಳುತ್ತೇನೆ.

ನಾನು ಕೆಲವೊಂದು ದಾಖಲೆಗಳನ್ನು ನ್ಯಾಯಾಲಯದ ಮುಂದೆ ಈ ದಿನ ಹಾಜರು ಮಾಡುತ್ತಿದ್ದೇನೆ. ಅವುಗಳನ್ನು ನನ್ನ ಪರವಾಗಿ ನಿಶಾನೆಯಾಗಿ ಗುರತಿಸಬೇಕಾಗಿ ಪ್ರಾರ್ಥನೆ .

ವಾದಿಯ ದಾಖಲೆಗಳನ್ನು ಈ ಕೆಳಕಂಡತೆ ನಿಶಾನೆಗಳಾಗಿ ಗುರುತಿಸಲಾಯಿತು.

| | |
|---|---|
| ನಿಪಿಃ 5 | ವಿಶೇಷ ಮೊಕ್ತಿಯಾರ ಪತ್ರ |

ನನ್ನ ದಾವೆಯನ್ನು ಡಿಕ್ರಿ ಮಾಡಬೇಕೆಂದು ಮಾನ್ಯ ನ್ಯಾಯಾಲಯಕ್ಕೆ ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ– ಕೋರಿಕೆಯ ಮೇರೆಗೆ ಮೂಂದುಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ.)

ಓ.ಹೇ.ಕೇ. ಸರಿ ಅದೆ.

**(ಆದಿತ್ಯ ಆರ್ ಕಲಾಲ್ )**

**ಹೆಚ್ಚುವರಿ ಸಿವಿಲ್ ಹಾಗೂ ಜೆ.ಎಮ್.ಎಫ್.ಸಿ.**

**ನ್ಯಾಯಾಧೀಶರು ರೋಣ.**